ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಉನ್ನತ ಶಿಕ್ಷಣ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 27/5/2020

# ಪಿಯು ಮಟ್ಟದಿಂದಲೇ ಆನ್‌ಲೈನ್ ಪಾಠಕ್ಕೆ ಸೂಚನೆ

ಸಂ.ಕ. ಸಮಾಚಾರ ಬೆಂಗಳೂರು: 27/5/20
ಲಾಕ್‌ಡೌನ್ ಸಂದರ್ಭದಲ್ಲಿ ಉನ್ನತ ಶಿಕ್ಷಣಕ್ಕೆ ನೀಡಲಾಗುತ್ತಿರುವ ಆನ್‌ಲೈನ್ ಪಾಠವನ್ನು ಪಿಯುಸಿ ಮಟ್ಟದಿಂದಲೇ ಆರಂಭಿಸುವ ಕಡೆ ಗಮನಹರಿಸುವಂತೆ ಮುಖ್ಯಮಂತ್ರಿಗಳು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ತಮ್ಮ ಅಧ್ಯಕ್ಷತೆಯಲ್ಲಿ ನಡೆದ ಉನ್ನತ ಶಿಕ್ಷಣ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಕೊರೊನಾ ಹಿನ್ನೆಲೆಯಲ್ಲಿ ಆನ್‌ಲೈನ್ ತರಗತಿಗಳ ಮೂಲಕ ಪಠ್ಯಕ್ರಮವನ್ನು ಪೂರ್ಣಗೊಳಿಸಿ, ವಿದ್ಯಾರ್ಥಿಗಳಿಗೆ ಪರೀಕ್ಷೆ ಎದುರಿಸಲು ಯಾವುದೇ ಸಮಸ್ಯೆಯಾಗದಂತೆ ಎಚ್ಚರವಹಿಸಬೇಕು. ಆನ್‌ಲೈನ್ ತರಗತಿಗಳು ಸಾಮಾನ್ಯ ತರಗತಿಗಳಿಗೆ ಹೋಲಿಸಿದರೆ, ಕಡಿಮೆ ವೆಚ್ಚದ್ದಾಗಿದ್ದು, ಈ ವ್ಯವಸ್ಥೆಯನ್ನು ಪಿ.ಯು ಮಟ್ಟದಿಂದಲೇ ಪ್ರಾರಂಭಿಸುವ ಬಗ್ಗೆ ಪರಿಶೀಲಿಸುವಂತೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ಉಪ ಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ ಅವರು, ಆನ್‌ಲೈನ್ ಪಾಠದ ವ್ಯವಸ್ಥೆ ಕುರಿತು ವಿವರಿಸಿ, ಲಾಕಡೌನ್ ಪೂರ್ವದಲ್ಲಿ ಶೇ. 79ರಷ್ಟು ಪಠ್ಯಕ್ರಮ ಪೂರ್ಣಗೊಂಡಿದ್ದು, ಮೇ 31ರೊಳಗೆ ಶೇ.21ರಷ್ಟು ಪಠ್ಯಕ್ರಮಗಳನ್ನು ಆನ್‌ಲೈನ್ ಬೋಧನೆ ಮೂಲಕ ಪೂರ್ಣಗೊಳಿಸಲಾಗುವುದು ಎಂದು ತಿಳಿಸಿದರು.

ವೆಬ್‌ಎಕ್ಸ್, ಸ್ಕೈಪ್ ಹಾಗೂ ಇತರೆ ಆನ್‌ಲೈನ್ ಪ್ಲಾಟ್ ಫಾರಂ ಮೂಲಕ 30 ಸಾವಿರ ಆನ್‌ಲೈನ್ ತರಗತಿಗಳನ್ನು ನಡೆಸಲಾಗಿದೆ. ವಾಟ್ಸಾಪ್ ಮತ್ತು ಟೆಲಿಗ್ರಾಂ ಮೂಲಕ ಶೇಕಡಾ 85 ರಷ್ಟು ವಿದ್ಯಾಥಿಗಳಿಗೆ ಇ–ನೋಟ್ಸ್, ಪಿಪಿಟಿ ಹಾಗೂ ಹಳೆಯ ಪ್ರಶ್ನೆ ಪತ್ರಿಕೆಗಳ ವಿತರಣೆ ಮಾಡಲಾಗಿದೆ. ಜ್ಞಾನನಿಧಿ ಯು–ಟ್ಯೂಬ್ ಚಾನೆಲ್ ಮೂಲಕ 65 ವಿಷಯಗಳ 7074 ಬೋಧನಾ ವಿಡಿಯೋ ಅಪ್‌ಲೋಡ್ ಮಾಡಲಾಗಿದ್ದು, 5 ಲಕ್ಷ ವೀಕ್ಷಣೆಯಾಗಿದೆ ಎಂದು ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು.



ಗೆಟ್ ಸಿಇಟಿ ಗೋ ಮೂಲಕ 2 ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳನ್ನು ತಲುಪಲಾಗಿದ್ದು, 13600 ವಿದ್ಯಾರ್ಥಿಗಳು ಯು ಟ್ಯೂಬ್ ಚಂದಾದಾರರಾಗಿದ್ದಾರೆ. 90 ಸಾವಿರ ಲಾಗಿನ್ ಸೃಜನೆ ಆಗಿದೆ. ಸದರಿ ಪೋರ್ಟಲ್‌ಗೆ ನಾಲ್ಕು ಸ್ಟಾರ್‌ಗಳು ದೊರೆತಿದ್ದು, ಉತ್ತಮ ಗುಣಮಟ್ಟ ಕಾಯ್ದುಕೊಳ್ಳಲಾಗಿದೆ. 10 ಸಾವಿರಕ್ಕೂ ಅಧಿಕ ಕರೆಗಳನ್ನು ಸ್ವೀಕರಿಸಿ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ವಿವರಿಸಿದರು.

ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಸರ್ಕಾರಿ ಕಾಲೇಜುಗಳಲ್ಲಿ ಉಚಿತ ಲ್ಯಾಪ್ ಟಾಪ್ ವಿತರಿಸಲಾಗಿರುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಕಲಿಕೆ ಅನುಷ್ಠಾನಕ್ಕೆ ಬರಲಿದೆ. ಕೊರೊನಾದ ಪ್ರ-ರಿಸ್ಥಿತಿಯಲ್ಲಿ ಡಿಜಿಟಲ್ ಕಲಿಕೆಗೆ ಹೆಚ್ಚಿನ ಮಹತ್ವ ಒದಗಿಸಲಾಗಿದ್ದು, ಮ್ಯಾ ಸಹಾಯವಾಣಿ ಪೋರ್ಟಲ್‌ನಿಂದ ವಿದ್ಯಾರ್ಥಿ ಹಾಗೂ ಶಿಕ್ಷಕರಿಗೆ ಪ್ರಯೋಜನಕಾರಿಯಾಗಿದೆ. ಹನ್ನೊಂದು ಕೋಟಿ ರೂ.ಗಳ ವೆಚ್ಚದಲ್ಲಿ ವಿಶ್ವವಿದ್ಯಾಲಯ ಮತ್ತು ಕಾಲೇಜು ಸಮಗ್ರ ನಿರ್ವಹಣಾ ವ್ಯವಸ್ಥೆಯನ್ನು ಇ–ಆಡಳಿತ ಇಲಾಖೆಯ ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ತಿಳಿಸಿ, ಯುಜಿಸಿ ಮಾರ್ಗಸೂಚಿಗಳನ್ನು ಪಾಲಿಸಲಾಗುತ್ತಿದ್ದು, ಪ್ರಸ್ತುತ ಶೈಕ್ಷಣಿಕ ವರ್ಷದ ಕಾರ್ಯಕ್ರಮಗಳನ್ನು ಜೂನ್ 15ರೊಳಗೆ ಪೂರ್ಣಗೊಳಿಸಲು ಸೂಚಿಸಲಾಗಿದೆ. ಈ ಬಾರಿ ಬೇಸಿಗೆ ರಜೆಯನ್ನು ಮೊಟಕುಗೊಳಿಸಲಾಗುವುದು ಎಂದು ಹೇಳಿದರು.

ಸಭೆಯಲ್ಲಿ ಮುಖ್ಯ ಕಾರ್ಯದರ್ಶಿ ಟಿ. ಎಂ.ವಿಜಯಭಾಸ್ಕರ್, ಮುಖ್ಯಮಂತ್ರಿಗಳ ಸಲಹೆಗಾರ ಎಂ. ಲಕ್ಷ್ಮೀನಾರಾಯಣ್, ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಐ.ಎಸ್.ಎನ್. ಪ್ರಸಾದ್, ಉನ್ನತ ಶಿಕ್ಷಣ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಡಾ: ಇ.ವಿ. ರಮಣ–ರೆಡ್ಡಿ, ಕಾಲೇಜು ಶಿಕ್ಷಣ ಇಲಾಖೆ ಆಯುಕ್ತ ಪ್ರದೀಪ್ ಮತ್ತಿತರರು ಉಪಸ್ಥಿತರಿದ್ದರು.